# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 364 |
| ಸದಸ್ಯರ ಹೆಸರು | : | ಶ್ರೀ ಎಂ. ಪಿ. ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |
| ಉತ್ತರಿಸುವ ದಿನಾಂಕ | : | 12.12.2018 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಮಿನಿ ವಿಧಾನಸೌಧಕ್ಕೆ 2016 ರಲ್ಲಿ ಅಡಿಪಾಯ ಹಾಕಲಾಗಿದ್ದು, ಇನ್ನು ಸಹ ಕೆಲಸ ಸಂಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು: (ವಿವರ ನೀಡುವುದು) | ಹೌದು.<br><br>ಮಿನಿ ವಿಧಾನ ಸೌಧ ನಿರ್ಮಾಣ ಕಾಮಗಾರಿ ಪ್ರಾರಂಭಿಸಲಾಗಿತ್ತು. ಆದರೆ, ಅಡಿಪಾಯ ತೆಗೆದಾಗ ಸದರಿ ಮಣ್ಣಿನಲ್ಲಿ ಭಾರ ಧರಿಸುವ ಶಕ್ತಿ (ಎಸ್.ಬಿ.ಸಿ) ಕಡಿಮೆ ಇರುವುದಾಗಿ ಕಂಡುಬಂದಿದ್ದರಿಂದ ಕಾಮಗಾರಿ ಮುಂದುವರೆಸಲು ಸಾಧ್ಯವಾಗಿರಲಿಲ್ಲ. ನಂತರ ತಾಂತ್ರಿಕ ಪರಿಣಿತರ ಅಭಿಪ್ರಾಯ ಪಡೆಯಲಾಗಿದ್ದು, 6.50 ಮೀ. ಆಳದ ಅಡಿಪಾಯ ತೆಗೆದು ರ್‍ಯಾಫ್ಟ್ ಫೌಂಡೇಶನ್ ಅಳವಡಿಸಿ ಕಟ್ಟಡ ನಿರ್ಮಿಸಲು ಸಲಹೆ ನೀಡಿದ ಪ್ರಯುಕ್ತ ಆ ಪ್ರಕಾರ ಕಾಮಗಾರಿಯನ್ನು ಪ್ರಾರಂಭಿಸಲಾಗಿದ್ದು, ಕಾಮಗಾರಿ ಕೆಲಸ ಕ್ಷಿಪ್ರಗತಿಯಲ್ಲಿರುತ್ತದೆ. |
| ಆ) | ಇದು ಸಂಪೂರ್ಣಗೊಳ್ಳಲು ಎಷ್ಟು ಸಮಯ ಬೇಕು; ಗುತ್ತಿಗೆದಾರರ ವಿವರ ಹಾಗೂ ಗುತ್ತಿಗೆದಾರರಿಗೆ ವಿಧಿಸಿರುವ ಷರತ್ತು ನಿಂಬಧನೆಗಳ ವಿವರ ನೀಡುವುದು; | ಸದರಿ ಮಿನಿ ವಿಧಾನಸೌಧ ಕಟ್ಟಡದ ಕಾಮಗಾರಿಯನ್ನು ಆಗಸ್ಟ್ 2018 ರಿಂದ 11 ತಿಂಗಳಲ್ಲಿ ಮುಕ್ತಾಯಗೊಳಿಸಲು ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ಈ ಕಟ್ಟಡದ ಕಾಮಗಾರಿಯನ್ನು ಮೆ: ಕೆ.ಬಿ.ಆರ್. ಇನ್ಫ್ರಾಟೆಕ್, ಬೆಂಗಳೂರು ಇವರಿಗೆ ವಹಿಸಲಾಗಿದ್ದು, ಕಾಮಗಾರಿಯನ್ನು 11 ತಿಂಗಳಲ್ಲಿ ಮುಕ್ತಾಯಗೊಳಿಸಲು ಮತ್ತು 2 ವರ್ಷ ನಿರ್ವಹಣೆ ಕಾರ್ಯ ಕೈಗೊಳ್ಳುವ ನಿಬಂಧನೆಯೊಂದಿಗೆ ಅನುಮತಿಸಲಾಗಿರುತ್ತದೆ. |
| ಇ) | ಯಾವ ಅವಧಿಯಲ್ಲಿ ಈ ಕಾಮಗಾರಿ ಮುಗಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು) | |

ಕಂಇ 85 ಡಬ್ಲ್ಯೂಬಿಆರ್ 2018

(ಆರ್.ವಿ. ದೇಶಪಾಂಡೆ)
ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು